ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕೇಂದ್ರ ಕಛೇರಿ: ಬೆಂಗಳೂರು.

ಕರಾಸಾ/ಕೇಕ/ಲೆಪ/ವೇತನ/2600/23-24. ದಿನಾಂಕ:15.11.2023.

**ಸುತ್ತೋಲೆ ಸಂಖ್ಯೆ:24/2023-24**

(ಲೆಕ್ಕಪತ್ರ ಇಲಾಖೆಯಿಂದ ಹೊರಡಿಸಲಾಗಿದೆ)

ವಿಷಯ: ದಿನಾಂಕ 01.07.2023 ರಿಂದ ತುಟ್ಟಿಭತ್ಯೆ ದರ ಪರಿಷ್ಕರಣೆ ಕುರಿತು.

ಉಲ್ಲೇಖ: 1) ಸರ್ಕಾರಿ ಆದೇಶ: ಆಇ 19 ಎಸ್‌ಆರ್‌ಪಿ 2023, ಬೆಂಗಳೂರು ದಿ:21.10.2023.

2) ಸಕ್ಷಮ ಪ್ರಾಧಿಕಾರಿಗಳ ಆದೇಶ ದಿನಾಂಕ 15.11.2023.

***

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 19 ಎಸ್‌ಆರ್‌ಪಿ 2023, ಬೆಂಗಳೂರು ದಿನಾಂಕ 21.10.2023 ರಲ್ಲಿ ಸರ್ಕಾರಿ ನೌಕರರಿಗೆ ದಿನಾಂಕ 01.07.2023 ರಿಂದ ಅನ್ವಯವಾಗುವಂತೆ ತುಟ್ಟಿಭತ್ಯೆ ದರವನ್ನು ಶೇ.35 ರಿಂದ ಶೇ.38.75 ಕ್ಕೆ ಹೆಚ್ಚಿಸಿ ಆದೇಶಿಸಿರುತ್ತದೆ.

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕರಾರಸಾ ನಿಗಮ ರವರು ರಾಜ್ಯ ಸಾರಿಗೆ ನಿಗಮಗಳಲ್ಲಿ ಪರಿಷ್ಕೃತ ತುಟ್ಟಿಭತ್ಯೆ ದರವನ್ನು ಅನುಷ್ಠಾನಗೊಳಿಸಿ ಪಾವತಿಸಲು ಆದೇಶಿಸಿರುವ ಪ್ರಯುಕ್ತ ಕೆಳಕಂಡಂತೆ ಕ್ರಮ ಜರುಗಿಸುವುದು.

01. ನಾಲ್ಕೂ ಸಾರಿಗೆ ನಿಗಮಗಳಲ್ಲಿ ನವೆಂಬರ್-2023 ರ ಮಾಹೆಯ ವೇತನದಲ್ಲಿ ಮತ್ತು ಮುಂದಕ್ಕೆ ತುಟ್ಟಿಭತ್ಯೆ ದರವನ್ನು ಶೇ.35 ರಿಂದ ಶೇ.38.75 ಕ್ಕೆ ಹೆಚ್ಚಿಸಿ ಅನುಷ್ಠಾನಗೊಳಿಸುವುದು.
02. ಕರಾರಸಾ ನಿಗಮದ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಜುಲೈ-2023 ರಿಂದ ಅಕ್ಟೋಬರ್-2023 ರವರೆಗಿನ ತುಟ್ಟಿಭತ್ಯೆ ಹಿಂಬಾಕಿ ಪಾವತಿಯ ಕುರಿತು ಪ್ರತ್ಯೇಕವಾಗಿ ಆದೇಶಿಸಲಾಗುವುದು.
03. ಸಹೋದರ ಸಂಸ್ಥೆಗಳಾದ ಬೆಂಮನಸಾ/ವಾಕರಸಾ/ಕಕರಸಾ ಸಂಸ್ಥೆಗಳು ಹಿಂಬಾಕಿ ಪಾವತಿಯ ಕುರಿತು ಆಯಾ ಸಂಸ್ಥೆಗಳು ಆರ್ಥಿಕ ಪರಿಸ್ಥಿತಿಗನುಗುಣವಾಗಿ ನಿರ್ಧರಿಸುವುದು.

ಸುತ್ತೋಲೆ ತಲುಪಿದ್ದಕ್ಕೆ ಸ್ವೀಕೃತಿ ಕಳುಹಿಸುವುದು

ಮುಖ್ಯ ಲೆಕ್ಕಾಧಿಕಾರಿ ಹಾಗೂ ಆ.ಸ.
ಕರಾರಸಾ ನಿಗಮ: ಕೇಂದ್ರ ಕಛೇರಿ.

ಪ್ರತಿಯನ್ನು ಆದರಪೂರ್ವಕವಾಗಿ:-

- ವ್ಯವಸ್ಥಾಪಕ ನಿರ್ದೇಶಕರು, ಬೆಂಮನಸಾ ಸಂಸ್ಥೆ/ ವಾಕರಸಾ ಸಂಸ್ಥೆ/ ಕಕರಸಾ ಸಂಸ್ಥೆ ರವರುಗಳ ಮಾಹಿತಿಗಾಗಿ.
- ನಿರ್ದೇಶಕರು (ಸಿ ಮತ್ತು ಜಾ), ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
- ಎಲ್ಲಾ ಇಲಾಖಾ ಮುಖ್ಯಸ್ಥರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು, ರವರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
- ವ್ಯವಸ್ಥಾಪಕ ನಿರ್ದೇಶಕರು, ಕರಾರಸಾ ನಿಗಮ, ರವರ ಹಿರಿಯ ಆಪ್ತ ಕಾರ್ಯದರ್ಶಿ ರವರ ಮಾಹಿತಿಗಾಗಿ.